ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಯಲಹಂಕ ವಲಯ

ಸಂಖ್ಯೆ: ಬೃ.ಬೆಂ.ಮ.ಪಾ/ಕಾ.ಅ/ಬ್ಯಾ.ವಿ/ಆ.ಅ/51/2023–24

ಕಾರ್ಯಪಾಲಕ ಅಭಿಯಂತರರು ಕಛೇರಿ
ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ,
ಬೆಂಗಳೂರು–92, ದಿನಾಂಕ: 01–02–2024.

ಆಡಳಿತಾತ್ಮಕ ಅನುಮೋದನೆ

ವಿಷಯ: Maintenance of water supply works to existing borewells at Dasarahalli village surrounding area in ward no. 08 (Amrutahalli).

ಉಲ್ಲೇಖ: ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರವನ್ನು ಚಲಾಯಿಸಿ ಮಾನ್ಯ ಆಡಳಿತಗಾರರು ಅನುಮೋದನೆ ನೀಡಿರುವ ಮೇರೆಗೆ. ಸಭೆ ದಿನಾಂಕ: 20–01–2024, ವಿಷಯದ ಸಂಖ್ಯೆ: 159/2023–24.

* * * * *

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಕೊಡಿಗೇಹಳ್ಳಿ ಉಪ ವಿಭಾಗ ರವರು 2023–24ನೇ ಸಾಲಿನ ಆಯವ್ಯಯದ ಪಿ–1802 ರಡಿಯಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ಕೋರಿರುವ ಮೇರೆಗೆ, 2023–24ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ ಪಿ–1802 ರಲ್ಲಿ ಮೀಸಲಿಟ್ಟಿರುವ ಅನುದಾನದಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಉಲ್ಲೇಖದಂತೆ ಮಾನ್ಯ ಆಡಳಿತಗಾರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಂದ ಅನುಮೋದನೆ ದೊರೆತಿರುವುದರಿಂದ, ಮಾನ್ಯ ಆಯುಕ್ತರು ನಿಯೋಜಿಸಿರುವ ಅಧಿಕಾರ ಪ್ರತ್ಯಾಯೋಜನೆ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/2023–24, ದಿನಾಂಕ: 06–12–2023 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ರೂ. 6.00 ಲಕ್ಷಗಳಿಗೆ (ಆರು ಲಕ್ಷ ಮಾತ್ರ) ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಮತ್ತು ಆಡಳಿತಾತ್ಮಕ ಅನುಮೋದನೆಯ ಪುಸ್ತಕದ ಪುಟ ಸಂಖ್ಯೆ 18 ರಲ್ಲಿ ನಮೂದಿಸಿ, ಈ ಕೆಳಗಿನ ಷರತ್ತುಗಳಿಗೊಳಪಡಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ,
ಬಿ.ಬಿ.ಎಂ.ಪಿ ಬೆಂಗಳೂರು–92

ಪ್ರತಿಯನ್ನು:

1) ಮಾನ್ಯ ವಲಯ ಆಯುಕ್ತರು (ಯಲಹಂಕ) ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
2) ಮಾನ್ಯ ಜಂಟಿ ಆಯುಕ್ತರು (ಯಲಹಂಕ) ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
3) ಮಾನ್ಯ ಮುಖ್ಯ ಅಭಿಯಂತರರು (ಯಲಹಂಕ) ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.